ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

# ವಿಶ್ವಮಾನ್ಯತೆ ನಗರವಾಗಿ ರಾಜಧಾನಿ ಅಭಿವೃದ್ಧಿ

## 'ಮೇಕ್ ಇನ್ ಇಂಡಿಯಾ' ಲಾಂಛನ ಲೋಕಾರ್ಪಣೆಗೊಳಿಸಿ ಸಿಎಂ ಯಡಿಯೂರಪ್ಪ ಅಭಿಮತ

**ಬೆಂಗಳೂರು:** ಮುಂದಿನ ದಿನಗಳಲ್ಲಿ ಬೆಂಗಳೂರು ನಗರವನ್ನು ಎಲ್ಲ ವಯೋಮಾನದವರು ವಾಸಿಸಲು ಬಯಸುವ ನೆಚ್ಚಿನ ತಾಣವನ್ನಾಗಿ ಅಭಿವೃದ್ಧಿಪಡಿಸಲು ನಮ್ಮ ಸರ್ಕಾರ ಶ್ರಮಿಸುತ್ತಿದ್ದು, ಮೇಕ್ ಇನ್ ಇಂಡಿಯಾ ಕಲಾಕೃತಿ ಕರ್ನಾಟಕದ ಆರ್ಥಿಕ ಪ್ರಗತಿಯ ಪ್ರತೀಕವಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಬಿಬಿಎಂಪಿ ವತಿಯಿಂದ ನಗರದ ವಿಂಡ್ಸರ್ ಮ್ಯಾನರ್ ವೃತ್ತದಲ್ಲಿ ಅಭಿವೃದ್ಧಿಪಡಿಸಿರುವ 'ಮೇಕ್ ಇನ್ ಇಂಡಿಯಾ' ಲಾಂಛನ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ನಗರದ ಹೃದಯ ಭಾಗದ ವಿಂಡ್ಸರ್ ಮ್ಯಾನರ್ ವೃತ್ತದಲ್ಲಿ ಮೇಕ್ ಇನ್ ಇಂಡಿಯಾ ಲಾಂಛನದ ಕಲಾಕೃತಿಯನ್ನು ಅನಾವರಣಗೊಳಿಸಲಾಗಿದ್ದು, ಸ್ವಾವಲಂಬಿ, ಸಮರ್ಥ ರಾಷ್ಟ್ರ ನಿರ್ಮಾಣಕ್ಕೆ ನಮ್ಮ ಗಣನೀಯ ಕೊಡುಗೆ ನಿರಂತರವಾಗಿ ಮುಂದುವರಿಯಲಿ ಎಂದರು.



ಬಿಬಿಎಂಪಿ ವತಿಯಿಂದ ನಗರದ ವಿಂಡ್ಸರ್ ಮ್ಯಾನರ್ ವೃತ್ತದಲ್ಲಿ ಅಭಿವೃದ್ಧಿಪಡಿಸಿರುವ 'ಮೇಕ್ ಇನ್ ಇಂಡಿಯಾ' ಲಾಂಛನವನ್ನು ಸಿಎಂ ಯಡಿಯೂರಪ್ಪ ಲೋಕಾರ್ಪಣೆಗೊಳಿಸಿದರು.



'ಮೇಕ್ ಇನ್ ಇಂಡಿಯಾ' ಲಾಂಛನ.

ದೇಶದ ಕೈಗಾರಿಕಾ ವಲಯದಲ್ಲಿ ಕರ್ನಾಟಕ ಮುಂಚೂಣಿಯಲ್ಲಿರುವ ರಾಜ್ಯವಾಗಿದ್ದು, ಹೂಡಿಕೆದಾರರ ನೆಚ್ಚಿನ ತಾಣವಾಗಿದೆ. ಕೈಗಾರಿಕೋದ್ಯಮ ಮತ್ತು ವಾಣಿಜ್ಯ ಚಟುವಟಿಕೆಗಳಲ್ಲಿ ಬೆಂಗಳೂರು ನಗರ ತನ್ನ ಪ್ರಾಶಸ್ತ್ಯವನ್ನು ನಿರಂತರವಾಗಿ ಕಾಪಾಡಿಕೊಂಡು ಬಂದಿದೆ. ಜಾಗತಿಕ ಕೇಂದ್ರವಾಗಿ ಬೆಂಗಳೂರು ಅಭಿವೃದ್ಧಿ ಹೊಂದುತ್ತಿರುವುದು, ವಿಶ್ವದ ಪ್ರಮುಖ ತಾಂತ್ರಿಕ ನೆಲೆಯಾಗಿ ರೂಪುಗೊಳ್ಳುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಇತ್ತೀಚಿನ ಸಮೀಕ್ಷೆಯಂತೆ ಇಡೀ ವಿಶ್ವದಲ್ಲೇ ಬೆಂಗಳೂರು ಅತಿ ವೇಗವಾಗಿ ಬೆಳೆಯುತ್ತಿರುವ ತಾಂತ್ರಿಕ ನೆಲೆ ಎಂಬ ಖ್ಯಾತಿಗೆ ಪಾತ್ರವಾಗಿದ್ದು, ಆ ಮೂಲಕ ಲಂಡನ್, ಬರ್ಲಿನ್, ಪ್ಯಾರಿಸ್ ಇತರೆ ನಗರಗಳನ್ನು ಹಿಂದಿಕ್ಕಿದೆ. ತಾಂತ್ರಿಕ ಕೌಶಲ್ಯ ಮತ್ತು ಬೆಳವಣಿಗೆಯಲ್ಲಿ ಬೆಂಗಳೂರು ವಿಶೇಷ ಸ್ಥಾನ ಕಾಪಾಡಿಕೊಂಡು ಹೋಗುವುದು ನಮ್ಮ ಸರ್ಕಾರದ ಸಂಕಲ್ಪ. ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿಯವರು ಕರ್ನಾಟಕದ ಭೇಟಿ ಸಂದರ್ಭದಲ್ಲೆಲ್ಲಾ ಸರ್ಕಾರಕ್ಕೆ ಸಲಹೆ ನೀಡುತ್ತಲೇ ಬಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರು ಮೇಕ್ ಇನ್ ಇಂಡಿಯಾ ಪರಿಕಲ್ಪನೆಯಡಿ ಅನಾವರಣಗೊಳಿಸಿರುವ ಈ ಲಾಂಛನವನ್ನು ಸ್ಥಾಪಿಸಿರುವುದು ಅರ್ಥಪೂರ್ಣ, ಔಚಿತ್ಯಪೂರ್ಣವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ನಮ್ಮ ಸರ್ಕಾರ ವಿಶ್ವ ಮಾರುಕಟ್ಟೆಯಲ್ಲಿ ಬ್ರ್ಯಾಂಡ್ ಕರ್ನಾಟಕವನ್ನು ಅಭಿವೃದ್ಧಿಪಡಿಸುವ ಮಹತ್ವಾಕಾಂಕ್ಷೆ ಹೊಂದಿದೆ. ಇದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಹೂಡಿಕೆದಾರಸ್ನೇಹಿ ವಾತಾವರಣ ಕಲ್ಪಿಸಲು ಅಗತ್ಯವಿರುವ ಎಲ್ಲ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಬೆಂಗಳೂರು ನಗರದಲ್ಲಿ ದೊಡ್ಡ ಮತ್ತು ಸಣ್ಣ ಕೈಗಾರಿಕೆಗಳು, ಮಾಹಿತಿ ತಂತ್ರಜ್ಞಾನ, ಎಲೆಕ್ಟ್ರಾನಿಕ್ ಉಪಕರಣ, ದೂರಸಂಪರ್ಕ, ವೈಮಾನಿಕ ಉದ್ಯಮ, ಔಷಧ ತಯಾರಿಕೆ, ಜೈವಿಕ ವಿಜ್ಞಾನ, ಆಹಾರ ಸಂಸ್ಕರಣೆ, ಆಟೋಮೊಬೈಲ್ ಬಿಡಿ ಭಾಗಗಳ ತಯಾರಿಕೆ ಸೇರಿದಂತೆ ವಿವಿಧ ಉದ್ಯಮಗಳು ನೆಲೆಯಾಗಿದೆ. ಇಂತಹ ವಿಶ್ವವಿಖ್ಯಾತ ನಗರವನ್ನು ವಿಶ್ವಮಾನ್ಯತೆಯ ನಗರವನ್ನಾಗಿ ರೂಪಿಸಲು ಸರ್ಕಾರ ಬೆಂಗಳೂರು ಮಿಷನ್- 2022 ಯೋಜನೆ ರೂಪಿಸಿದ್ದು, ದೇಶದ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ ವರ್ಷದಲ್ಲಿ ಈ ಯೋಜನೆ ಸಾಕಾರಗೊಳಿಸುವ ಸಂಕಲ್ಪ ನಮ್ಮದು ಎಂದು ಹೆಮ್ಮೆಯಿಂದ ನುಡಿದರು.

ಉಪಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥ ನಾರಾಯಣ, ಸಚಿವರಾದ ಬಸವರಾಜ ಬೊಮ್ಮಾಯಿ, ಆರ್.ಅಶೋಕ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎಂ.ಪಿ.ರೇಣುಕಾಚಾರ್ಯ, ಬಿಡಿಎ ಅಧ್ಯಕ್ಷ ಎಸ್.ಆರ್. ವಿಶ್ವನಾಥ್, ವಿಧಾನ ಪರಿಷತ್ ಸದಸ್ಯ ರಮೇಶ್‌ಗೌಡ, ರಾಜ್ಯ ಬಿಜೆಪಿ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ, ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ, ಆಯುಕ್ತ ಎನ್. ಮಂಜುನಾಥ ಪ್ರಸಾದ್ ಇತರರು ಇದ್ದರು.